ಹಿರಿಯ ಸಿವಿಲ್ ನ್ಯಾಯಾಧಿಶರು ಮತ್ತು ಜೆಎಂಎಫ್ ಸಿ ರವರ ನ್ಯಾಯಾಲಯ,
ದೇವದುರ್ಗ.

**ಸಿ.ಸಿ. ನಂ.644/2023**

**ಪಿರ್ಯಾದುದಾರರು** : ಕರ್ನಾಟಕ ರಾಜ್ಯ,
ಜಾಲಹಳ್ಳೀ ಪೊಲೀಸ ಠಾಣೆ.

**ವಿರುದ್ಧ –**

**ಆರೋಪಿತರಾದ** ಮಾರುತಿ ತಂದೆ ಶರಣಪ್ಪ,
ವಯಸ್ಸು: 30 ವರ್ಷಗಳು, ಉಃ ಅಂಗಡಿ ಕೆಲಸ,
ಸಾಃ ಶಾವಂತಗಲ್, ತಾಃ ದೇವದುರ್ಗ.

**ದೋಷರೋಪಣೆ**

ಶ್ರೀ. ಸುರೇಶ ಅಣ್ಣಪ್ಪ ಸವದಿ., ಹಿರಿಯ ಸಿವಿಲ್ ನ್ಯಾಯಾಧಿಶರು ಮತ್ತು ಜೆ.ಎಂ. ಎಫ್. ಸಿ. ರವರ ನ್ಯಾಯಾಧೀಶರು, ದೇವದುರ್ಗ, ಈ ಮೂಲಕ ಆರೋಪಿತರಾದ ನಿಮ್ಮ ಮೇಲೆ ಮಾಡುವ ದೋಷಾರೋಪಣೆ ಏನೆಂದರೆ-

ದಿನಾಂಕ 24.06.2023 ರಂದು ಮಧ್ಯಾಹ್ನ 12.35 ಗಂಟೆ ಸಮಯದಲ್ಲಿ ಜಾಲಹಳ್ಳಿ ಪೊಲೀಸ್ ಠಾಣಾ ಸರಹದ್ದು, ದೇವದುರ್ಗ ತಾಲ್ಲೂಕು, ಶಾವಂತಗಲ್ ಗ್ರಾಮದಲ್ಲಿ ಆರೋಪಿಯಾದ ನೀವು ನಿಮ್ಮ ಅಂಗಡಿಯ ಮುಂದೆ ಸಾರ್ವಜನಿಕ ಸ್ಥಳದಲ್ಲಿ ಕರ್ನಾಟಕ ಅಬಕಾರಿ ಕಾಯ್ದೆಯ ಉಪಬಂಧಗಳಿಗೆ ವಿರುದ್ದವಾಗಿ 90 ಎಂ.ಎಲ್.ನ ಓರಿಜಿನಲ್ ಚಾಯ್ಸ್ ಡಿಲಕ್ಸ್ ವಿಸ್ಕಿ ನ 36 ಪೌಚ್‌ಗಳನ್ನು ಯಾವುದೇ ಪರವಾನಿಗೆ ಇಲ್ಲದೇ ಮಾರಾಟ ಮಾಡುವ ಮೂಲಕ ಕರ್ನಾಟಕ ಅಬಕಾರಿ ಕಾಯ್ದೆ-1965 ಕಲಂ.32 ರಡಿಯಲ್ಲಿ ಶಿಕ್ಷಾರ್ಹ ಅಪರಾಧಗಳನ್ನು ಎಸಗಿದ್ದು, ಅದು ನನ್ನ ಸಂಜ್ಞೆಯಲ್ಲಿ ಬರುತ್ತದೆ.

ಎರಡನೆಯದಾಗಿ ಅದೇ ದಿನ, ಅದೇ ಸಮಯ ಮತ್ತು ಅದೇ ಸ್ಥಳದಲ್ಲಿ ಆರೋಪಿಯಾದ ನೀವು ನಿಮ್ಮ ಅಂಗಡಿಯ ಮುಂದೆ ಸಾರ್ವಜನಿಕ ಸ್ಥಳದಲ್ಲಿ ಕರ್ನಾಟಕ ಅಬಕಾರಿ ಕಾಯ್ದೆಯ ಉಪಬಂಧಗಳಿಗೆ ವಿರುದ್ದವಾಗಿ 90 ಎಂ.ಎಲ್.ನ ಓರಿಜಿನಲ್ ಚಾಯ್ಸ್ ಡಿಲಕ್ಸ್ ವಿಸ್ಕಿ ನ 36 ಪೌಚ್‌ಗಳನ್ನು ಪರವಾನಿಗೆ ಇಲ್ಲದೇ ಕಾನೂನು ಬಾಹಿರವಾಗಿ ಸ್ವಾಧೀನ ಹೊಂದುವ ಮೂಲಕ ಕರ್ನಾಟಕ ಅಬಕಾರಿ ಕಾಯ್ದೆ-1965

ಕಲಂ.34 ರಡಿಯಲ್ಲಿ ಶಿಕ್ಷಾರ್ಹ ಅಪರಾಧಗಳನ್ನು ಎಸಗಿದ್ದು, ಅದು ನನ್ನ ಸಂಜ್ಞೆಯಲ್ಲಿ ಬರುತ್ತದೆ.

ಸದರೀ ಅಪರಾಧಗಳು ಈ ನ್ಯಾಯಾಲಯದ ಸಂಜ್ಞೆಯಲ್ಲಿ ಬರುತ್ತವೆ ಮತ್ತು ಸದರಿ ವಿಚಾರಣೆಯು ನನ್ನ ಸಮಕ್ಷಮ ನಡೆಯಬೇಕೆಂದು ಈ ಮೂಲಕ ನಿರ್ದೇಶಿಸುತ್ತೇನೆ.

(ಈ ದೋಷಾರೋಪಣೆಯನ್ನು ಈ ದಿನ ದಿನಾಂಕಃ 30.12.2024 ರಂದು ಆರೋಪಿತರಿಗೆ ತೆರೆದ ನ್ಯಾಯಾಲಯದಲ್ಲಿ ಕನ್ನಡ ಭಾಷ್ಷೆಯಲ್ಲಿ ಓದಿ ಹೇಳಿ ಆತನ ಉತ್ತರವನ್ನು ಯಥಾವತ್ತಾಗಿ ದಾಖಲಿಸಿದೆ)

ಓ. ಹೇ. ಕೇ. ಸರಿ ಇದೆ.

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆಎಂಎಫ್ ಸಿ ದೇವದುರ್ಗ.

ಹಿರಿಯ ಸಿವಿಲ್ ನ್ಯಾಯಾಧಿಶರು ಮತ್ತು ಜೆಎಂಎಫ್ ಸಿ ರವರ ನ್ಯಾಯಾಲಯ,
ದೇವದುರ್ಗ.

**ಸಿ.ಸಿ. ನಂ.644/2023**

**ಪಿರ್ಯಾದುದಾರರು** : ಕರ್ನಾಟಕ ರಾಜ್ಯ,
ಜಾಲಹಳ್ಳೀ ಪೊಲೀಸ ಠಾಣೆ.

**ವಿರುದ್ಧ –**

**ಆರೋಪಿತರಾದ** ಮಾರುತಿ ತಂದೆ ಶರಣಪ್ಪ,
ವಯಸ್ಸು: 30 ವರ್ಷಗಳು, ಉಃ ಅಂಗಡಿ ಕೆಲಸ,
ಸಾಃ ಶಾವಂತಗಲ್, ತಾಃ ದೇವದುರ್ಗ.

**:: ಆಪಾದನೆ ::**

1. ನಿಮಗೆ ಓದಿ ಹೇಳಿದ ಆಪಾದನೆ ಅರ್ಥವಾಯಿತಾ?

ಉತ್ತರಃ-

2. ನೀವು ತಪ್ಪು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆ ಆಗಬೇಕಾ?

ಉತ್ತರಃ-

ಮೇಲಿನ ಹೇಳಿಕೆಯನ್ನು ಆಪಾದಿತರಿಗೆ ತಿಳಿಯುವಂತೆ ಆತನ ಭಾಷೆಯಲ್ಲಿ ಓದಿ, ಹೇಳಿ ತಿಳಿಸಿ ಅವರ ಹೇಳಿಕೆ ಪಡೆದುದಾಗಿ ದೃಢೀಕರಿಸಿರುತ್ತೇನೆ.

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆಎಂಎಫ್‌ಸಿ., ದೇವದುರ್ಗ.

ಆರೋಪಿತರ ಸಹಿ